# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- Capulus Technologies Pvt. Ltd. ಸಂಸ್ಥೆಯು ಅಭಿವೃದ್ಧಿಪಡಿಸಿರುವ Fishing Boats log Management Mobile App ಅನ್ನು ಮೀನುಗಾರಿಕೆ ಇಲಾಖೆಯಡಿಯಲ್ಲಿ ಅಳವಡಿಸಿಕೊಳ್ಳುವ ಕುರಿತು.

ಓದಲಾಗಿದೆ:- Capulus Technologies Pvt. Ltd., ಇವರ ಮನವಿ.

******

## ಪ್ರಸ್ತಾವನೆ:

ಮೇಲೆ ಓದಲಾದ Capulus Technologies Pvt Ltd ಇವರ ಮನವಿಯಲ್ಲಿ, FISHING BOATS LOG MANAGEMENT MOBILE APP ಸಂಬಂಧಿಸಿದಂತೆ Capulus Technologies Pvt. Ltd. ಸಂಸ್ಥೆಯು ಅಭಿವೃದ್ಧಿಪಡಿಸಿರುವ App ನ್ನು ಮೀನುಗಾರಿಕೆ ದೋಣಿಗಳ ಚಲನವಲನಕ್ಕೆ ಹಾಗೂ ಪತ್ತೆ ಹಚ್ಚುವ ಕಾರ್ಯಚಟುವಟಿಕೆಗಳಿಗೆ ಬಳಸಿಕೊಳ್ಳುವಂತೆ ಮನವಿ ಸಲ್ಲಿಸಿರುತ್ತಾರೆ. ಸದರಿ ಮನವಿಯಲ್ಲಿ, ಸಮುದ್ರ ಮೀನುಗಾರಿಕೆಗೆ ಸಂಬಂಧಿಸಿದಂತೆ ಸಮುದ್ರದಲ್ಲಿ ಯಾಂತ್ರಿಕೃತ ಮೀನುಗಾರಿಕೆ ದೋಣಿಗಳ ಜಾಡು ಹಿಡಿಯುವುದು, ಹುಡುಕಾಟ ಮತ್ತು ಪತ್ತೆ ಹಚ್ಚುವ ಕಾರ್ಯಚರಣೆಗಳಿಗೆ ಸಂಬಂಧಿಸಿದಂತೆ ಪ್ರಸ್ತಾವಿತ ಅಪ್ಲಿಕೇಷನ್ (App) ವಾಣಿಜ್ಯ ಮೀನುಗಾರಿಕೆ ದೋಣಿ ಆಗಮನ ಮತ್ತು ನಿರ್ಗಮನವನ್ನು ಮೇಲ್ವಿಚಾರಣೆ ಮಾಡಲು ಅಪ್ಲಿಕೇಷನ್ (App) ಆಧಾರಿತ ಕಾರ್ಯವಿಧಾನವನ್ನು ಒದಗಿಸುತ್ತದೆ. ಇದು ಒಟ್ಟಾರೆ ಸಮುದ್ರ ಕಣ್ಗಾವಲಿನ ಅಪ್ಲಿಕೇಷನ್ (App) ಆಗಿರುತ್ತದೆ. ಸಮುದ್ರದಲ್ಲಿ ಎಷ್ಟು ಮೀನುಗಾರಿಕೆ ದೋಣಿಗಳಿವೆ ಎಂಬುದನ್ನು ನಿರ್ಧರಿಸುತ್ತದೆ. ಸದರಿ ಅಪ್ಲಿಕೇಷನ್ (App)ನ ಮೂಲಭೂತ ಕಾರ್ಯವೆಂದರೆ OTP ಆಧಾರಿತ ಲಾಗಿನ್ ಮೊಬೈಲ್ ಅಪ್ಲಿಕೇಷನ್ (App)ನ್ನು ಎಲ್ಲಾ ಮೀನುಗಾರಿಕೆ ದೋಣಿಗಳ ಅಧಿಕೃತ ವ್ಯಕ್ತಿಗಳು ಹಾಗೂ ಅವರ ಮೊಬೈಲ್ ಸಂಖ್ಯೆಯನ್ನು ಬಳಸಿಕೊಂಡು ಅಪ್ಲಿಕೇಷನ್ (App)ಗೆ ನೋಂದಾಯಿಸಿಕೊಳ್ಳಬೇಕು. ಅನಂತರ OTP ಕಳುಹಿಸಿಕೊಡಲಾಗುತ್ತದೆ. ನಂತರ ಈ OTP ಬಳಸಿ ಅವರ ನೋಂದಾಯಿತ ಮೊಬೈಲ್ ಸಂಖ್ಯೆಗೆ ಲಾಗಿನ್ ಆಗಬೇಕು. ಈ ಕಾರ್ಯವಿಧಾನವನ್ನು ಬಳಸಿಕೊಂಡು ಅಪ್ಲಿಕೇಷನ್ (App) ಬಳಕೆದಾರರ ಮೊಬೈಲ್ ಸಂಖ್ಯೆಯನ್ನು ಪರಿಶೀಲಿಸಲಾಗುತ್ತದೆ ಹಾಗೂ ಹೆಚ್ಚಿನ ಸಂವಹನಕ್ಕಾಗಿ ಬಳಸಬಹುದು ಎಂದು ತಿಳಿಸಿರುತ್ತಾರೆ.

ಸದರಿ ಮನವಿಯನ್ನು ಪರಿಶೀಲಿಸಿ, Capulus Technologies Pvt. Ltd. ಸಂಸ್ಥೆಯು ಅಭಿವೃದ್ಧಿಪಡಿಸಿರುವ Fishing Boats log Management Mobile App.. ಅನ್ನು ಮೀನುಗಾರಿಕೆ ಇಲಾಖೆಯಲ್ಲಿ ಅಳವಡಿಸಿಕೊಳ್ಳಲು ಸರ್ಕಾರವು ತೀರ್ಮಾನಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ ಇ-135 ಮೀಇಯೋ 2020, ಬೆಂಗಳೂರು**
**ದಿನಾಂಕ: 10-07-2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, Capulus Technologies Pvt. Ltd. ಸಂಸ್ಥೆಯು ಅಭಿವೃದ್ಧಿಪಡಿಸಿರುವ Fishing Boats log Management Mobile App ಅನ್ನು ಮೀನುಗಾರಿಕೆ ಇಲಾಖೆಯಡಿಯಲ್ಲಿ ಅಳವಡಿಸಿಕೊಳ್ಳಲು ಹಾಗೂ ಅದಕ್ಕೆ ಅಗತ್ಯವಿರುವ ರೂ.2,77,300-00 (ಎರಡು ಲಕ್ಷದ ಎಪ್ಪತ್ತೇಳು ಸಾವಿರದ ಮುನ್ನೂರು ರೂಪಾಯಿಗಳು ಮಾತ್ರ)ಗಳ ಅನುದಾನವನ್ನು ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ ನಿ., ಮಂಗಳೂರು ಇವರಿಂದ ಭರಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/2/ಟಿಎಫ್‌ಪಿ/2020, ದಿನಾಂಕ: 30-05-2020 ರಲ್ಲಿ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

Kamakshi U.A. 10/7/2020
(ಕಾಮಾಕ್ಷಿ ಯು.ಎ.)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

10/07/2020

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ) (ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.

3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.

4) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ ನಿ., ಹೊಯಿಗೆ ಬಜಾರ್, ಮಂಗಳೂರು

5) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.

6) ಮೀನುಗಾರಿಕೆ ಉಪ ನಿರ್ದೇಶಕರು, ಮಂಗಳೂರು / ಕಾರವಾರ / ಉಡುಪಿ.

7) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ, ತೋಟಗಾರಿಕೆ ಮತ್ತು ಪಸಂಮೀ ಇಲಾಖೆ.

8) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.

9) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

10) Capulus Technologies Pvt. Ltd., 2nd Floor, SVK Complex, Near Axis Bank, Basavanahalli Main Road, Chikkamagaluru, KA, IN-577101.

11) ಸಂಬಂಧಪಟ್ಟವರುಗಳಿಗೆ ಮೀನುಗಾರಿಕೆ ನಿರ್ದೇಶಕರ ಮುಖಾಂತರ.

12) ಮಾನ್ಯ ಮುಜರಾಯಿ, ಮೀನುಗಾರಿಕೆ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.

13) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.